# ತುಮಕೂರು ವಿಶ್ವವಿದ್ಯಾನಿಲಯ

ಪರೀಕ್ಷಾ ಭವನ, ಬಿ.ಹೆಚ್.ರಸ್ತೆ, ತುಮಕೂರು-572 103☏:0816-2255650, 2273511,ಫ್ಯಾಕ್ಸ್ :0816-2270719

ಸಂಖ್ಯೆ : ತು.ವಿ.: ಪ.ವಿ.:ಪಿ.ಜಿ.-09:2019-20: ದಿನಾಂಕ:02.11.2019

## ಅಧಿಸೂಚನೆ

ಕರಡು ಅನುಮೋದಿಸಿದೆ.

ವಿಷಯ: 2019 ರ ಡಿಸೆಂಬರ್ ಮತ್ತು 2020 ರ ಜನವರಿ ಮಾಹೆಗಳಲ್ಲಿ ನಡೆಯಲಿರುವ ವಿವಿಧ ಸ್ನಾತಕೋತ್ತರ ಪದವಿಯ I & III ನೇ ಸೆಮಿಸ್ಟರ್ ಪರೀಕ್ಷೆಗಳ ಪರೀಕ್ಷಾ ಶುಲ್ಕ ಪಾವತಿಸುವ ಕುರಿತು.

ಉಲ್ಲೇಖ: ಮಾನ್ಯ ಕುಲಪತಿಯವರ ಅನುಮೋದನೆಯ ದಿನಾಂಕ: 02.11.2019

*****

2019-20 ನೇ ಶೈಕ್ಷಣಿಕ ಸಾಲಿನ ಡಿಸೆಂಬರ್ 2019 ರ ಮತ್ತು ಜನವರಿ 2020 ರ ಮಾಹೆಗಳಲ್ಲಿ ನಡೆಯಲಿರುವ ವಿವಿಧ ಸ್ನಾತಕೋತ್ತರ ಪದವಿಯ I ಮತ್ತು III ನೇ ಸೆಮಿಸ್ಟರ್ (ಸಿಬಿಸಿಎಸ್) ಪರೀಕ್ಷೆಗಳಿಗೆ, ಎಲ್ಲಾ ಅರ್ಹ ವಿದ್ಯಾರ್ಥಿಗಳಿಂದ ಈ ಕೆಳಕಂಡಂತೆ ಪರೀಕ್ಷಾ ಶುಲ್ಕವನ್ನು ಪಾವತಿಸಿಕೊಳ್ಳುವುದು.

ಪರೀಕ್ಷಾ ವೇಳಾಪಟ್ಟಿ ಮತ್ತು ಪರೀಕ್ಷಾ ಕೇಂದ್ರಗಳ ವಿವರಗಳನ್ನು ನಂತರದ ದಿನಗಳಲ್ಲಿ ತಿಳಿಸಲಾಗುವುದು.

### I ಮತ್ತು III ಸೆಮಿಸ್ಟರ್

| ಕ್ರ.ಸಂ | ಕೋರ್ಸ್ | ನವೀನ | ಪೂರಕ (ಒಂದು ವಿಷಯಕ್ಕೆ) |
|---|---|---|---|
| 1. | ಎಂ.ಎ./ಎಂ.ಕಾಂ./ ಎಂ.ಕಾಂ.-ಇನ್‌ಫಾರ್ಮೇಷನ್ ಸಿಸ್ಟಮ್/ಎಂ.ಎಸ್ಸಿ./ಎಂ.ಎಸ್‌ಕಮ್ಯೂನಿಕೇಷನ್/ಎಂ.ಎಸ್ ಎಲೆಕ್ಟ್ರಾನಿಕ್ ಮೀಡಿಯಾ/ಎಂ.ಎಲ್.ಐ.ಸಿ | 1000-00 | 200-00 |
| 2. | ಎಂ.ಎಸ್.ಡಬ್ಲ್ಯೂ. | 1000-00 | 265-00 |
| 3. | ಎಂ.ಬಿ.ಎ | 2000-00 | 485-00 |
| 4. | ಎಂ.ಎಸ್ಸಿ. ಜೀವತಂತ್ರಜ್ಞಾನ/ಸೂಕ್ಷ್ಮಜೀವಶಾಸ್ತ್ರ | 2000-00 | 200-00 |
| 5. | P.G.Diploma in coconut plantation/ Environmental Impact. | 500-00 | -- |

*** ವಿದ್ಯಾರ್ಥಿಯು ಮೂರು ಅಥವಾ ಮೂರಕ್ಕಿಂತ ಹೆಚ್ಚು ವಿಷಯಗಳಿಗೆ ಪೂರ್ಣ ಶುಲ್ಕವನ್ನು ಪಾವತಿಸಬೇಕು.

### ಗಮನಿಸಬೇಕಾದ ದಿನಾಂಕಗಳು

| | | |
|---|---|---|
| 1. | ವಿದ್ಯಾರ್ಥಿಗಳಿಗೆ ದಂಡ ರಹಿತ ಶುಲ್ಕ ಪಾವತಿಸಲು ಕೊನೆಯ ದಿನಾಂಕ | 16.11.2019 |
| 2. | ವಿದ್ಯಾರ್ಥಿಗಳಿಗೆ ರೂ 100/- ದಂಡ ಶುಲ್ಕದೊಂದಿಗೆ ಶುಲ್ಕ ಪಾವತಿಸಲು ಕೊನೆಯ ದಿನಾಂಕ | 22.11.2019 |
| 3. | ಆನ್‌ಲೈನ್‌ನಲ್ಲಿ ನಮೂದಿಸಲು ಕೊನೆಯ ದಿನಾಂಕ | 28.11.2019 |
| 4. | ಕಾಲೇಜಿನವರು ಶುಲ್ಕವನ್ನು ವಿಶ್ವವಿದ್ಯಾನಿಲಯ ಖಾತೆಗೆ ಪಾವತಿಸಲು ಮತ್ತು ಶುಲ್ಕಗಳ ವಿವರವನ್ನು ಕಾಲೇಜಿನವರು/ ವಿಭಾಗದವರು ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸಲು ಕೊನೆಯ ದಿನಾಂಕ | 02.12.2019 |
| 5. | ಕಾಲೇಜು ಮತ್ತು ಎಲ್ಲಾ ವಿಭಾಗದವರು ಆಂತರಿಕ ಅಂಕಗಳನ್ನು ಮತ್ತು ಕಿರು ಪ್ರಬಂಧ (Dissertation) ಗಳನ್ನು ಸಲ್ಲಿಸಲು ಕೊನೆಯ ದಿನಾಂಕ(ಅನ್ವಯಿಸಿದ್ದಲ್ಲಿ ಮಾತ್ರ.) | 05.12.2019 |

ಕಾಲೇಜು/ವಿಭಾಗದ ವಿದ್ಯಾರ್ಥಿಗಳು ಆಯ್ಕೆ ಮಾಡಿಕೊಂಡಿರುವ ಮುಕ್ತ ಆಯ್ಕೆ ಪತ್ರಿಕೆಗಳನ್ನು (Open Elective Papers) ಖಚಿತಪಡಿಸಿಕೊಂಡು ನಂತರ ಸರಿಯಾಗಿ ಆನ್‌ಲೈನ್‌ಲ್ಲಿ ನಮೂದಿಸುವುದು.

(.....2)

<u>ಶುಲ್ಕ ವಿನಾಯಿತಿ</u>

ಈ ಕೆಳಗಿನಂತೆ ಕುಟುಂಬದ ವಾರ್ಷಿಕ ವರಮಾನ ಹೊಂದಿರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1 , 2ಎ, 2ಬಿ,3ಎ, 3ಬಿ ಮತ್ತು ಇತರೆ ಎಲ್ಲಾ ಸಮುದಾಯಗಳಗೆ ಸೇರಿದ ವಿದ್ಯಾರ್ಥಿಗಳು ಶುಲ್ಕ ವಿನಾಯಿತಿ ಪಡೆಯಲು ಅರ್ಹರಿರುತ್ತಾರೆ.

1. ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡ/ ಪ್ರವರ್ಗ-1 : ರೂ. 2.50 ಲಕ್ಷಕ್ಕೆ ಮೀರದಂತೆ
2. 2ಎ, 2ಬಿ, 3ಎ, 3ಬಿ ಮತ್ತು ಇತರೆ ಎಲ್ಲಾ ಸಮುದಾಯಗಳಿಗೆ : ರೂ. 1 .00 ಲಕ್ಷಕ್ಕೆ ಮೀರದಂತೆ

ಸಂಬಂಧಪಟ್ಟ ಇಲಾಖೆಗಳಿಂದ ಈಗಾಗಲೇ ವಿದ್ಯಾರ್ಥಿ ವೇತನಕ್ಕೆ ಅರ್ಜಿ ಸಲ್ಲಿಸಿದಂತಹ ವಿದ್ಯಾರ್ಥಿಗಳು ಪರೀಕ್ಷಾ ಶುಲ್ಕದಲ್ಲಿ ವಿನಾಯಿತಿ ಪಡೆಯಲು ಅರ್ಹರಿರುತ್ತಾರೆ.

ಎಲ್ಲಾ ಪುನರಾವರ್ತಿತ ವಿದ್ಯಾರ್ಥಿಗಳು (ಸೂಚಿಸಿದ ಆದಾಯ ಮಿತಿಗೊಳಪಟ್ಟು) ನವೀನ ಸೆಮಿಸ್ಟರ್‌ನ ಪರೀಕ್ಷಾ ಶುಲ್ಕದಲ್ಲಿ ವಿನಾಯಿತಿ ಪಡೆಯಲು ಅರ್ಹರಿರುತ್ತಾರೆ (ಉದಾ: ಮೂರನೇ ಸೆಮಿಸ್ಟರ್‌ನಲ್ಲಿ ನವೀನರಾಗಿದ್ದು ಪ್ರಥಮ ಸೆಮಿಸ್ಟರ್‌ನಲ್ಲಿ ಪುನರಾವರ್ತಿತರಾದಲ್ಲಿ (Repeater) ಮೂರನೇ ಸೆಮಿಸ್ಟರ್‌ನ ಪರೀಕ್ಷಾ ಶುಲ್ಕದಲ್ಲಿ ವಿನಾಯಿತಿ ಪಡೆಯಲು ಅರ್ಹರಿದ್ದು ಪುನರಾವರ್ತಿತ (Repeaters exam) ಪರೀಕ್ಷೆಗಳಿಗೆ ಶುಲ್ಕ ವಿನಾಯಿತಿ ಪಡೆಯಲು ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ವಿದ್ಯಾರ್ಥಿಗಳನ್ನು ಹೊರತುಪಡಿಸಿ ಉಳಿದ ವಿದ್ಯಾರ್ಥಿಗಳು ಅರ್ಹರಾಗಿರುವುದಿಲ್ಲ).

ಪರೀಕ್ಷಾ ಶುಲ್ಕದಲ್ಲಿ ವಿನಾಯಿತಿ ಪಡೆದಿರುವ ವಿದ್ಯಾರ್ಥಿಗಳೂ ಸಹ ಈ ಕೆಳಗೆ ನಮೂದಿಸಿರುವ ಶುಲ್ಕವನ್ನು ಕಡ್ಡಾಯವಾಗಿ ಪಾವತಿಸುವುದು. <u>(ಪ್ರತಿ ಸೆಮಿಸ್ಟರ್‌ಗೆ ಅನ್ವಯಿಸುವಂತೆ)</u>

| ಕ್ರ.ಸಂ | ಇತರೆ ಶುಲ್ಕಗಳ ವಿವರ | ಮೊತ್ತ (ರೂ.ಗಳಲ್ಲಿ) |
|---|---|---|
| 1. | ಅಂಕಪಟ್ಟಿ ಶುಲ್ಕ | 156-00 |
| 2. | ಆನ್‌ಲೈನ್ ಅರ್ಜಿ ಶುಲ್ಕ | 30-00 |
| 3. | ಅರ್ಜಿ ಪರಿಶೀಲನಾ ಶುಲ್ಕ | 10-00 |
| 4. | ಪರೀಕ್ಷಾ ಸಿದ್ಧತಾ ಶುಲ್ಕ (Process fee) | 40-00 |
| 5. | ಪ್ರಾಯೋಗಿಕ ಪರೀಕ್ಷಾ ಶುಲ್ಕ (Per Practical) | 150-00 |
| 6. | ಪ್ರಾಜೆಕ್ಟ್ ಶುಲ್ಕ (Per Project) (ಅನ್ವಯಿಸಿದ್ದಲ್ಲಿ ಮಾತ್ರ.) | 200-00 |
| 7. | ಕಿರು ಪ್ರಬಂಧ ಶುಲ್ಕ (Per Dissertation) (ಅನ್ವಯಿಸಿದ್ದಲ್ಲಿ ಮಾತ್ರ.) | 200-00 |
| 8. | ಮೌಖಿಕ ಸಂದರ್ಶನ (Per Viva-Voce ) (ಅನ್ವಯಿಸಿದ್ದಲ್ಲಿ ಮಾತ್ರ.) | 150-00 |

<u>ವಿಶೇಷ ಸೂಚನೆ:</u> ನಿರ್ದೇಶಕರು/ಪ್ರಾಂಶುಪಾಲರು/ಮುಖ್ಯಸ್ಥರು, ವಿದ್ಯಾರ್ಥಿ ವೇತನಕ್ಕೆ ಅರ್ಜಿ ಸಲ್ಲಿಸಿರುವ ಮತ್ತು ಶುಲ್ಕ ವಿನಾಯಿತಿಗೆ ಅರ್ಹರಿರುವ ಎಸ್ಸಿ, ಎಸ್ಟಿ (fresher's & repeaters) ಮತ್ತು ಇತರೆ ವರ್ಗದ ಸಮುದಾಯಗಳಿಗೆ ಸೇರಿದ ವಿದ್ಯಾರ್ಥಿಗಳಿಂದ ಒತ್ತಾಯ ಪೂರ್ವಕವಾಗಿ ಪರೀಕ್ಷಾ ಶುಲ್ಕವನ್ನು ಪಡೆಯುವಂತಿಲ್ಲ.

1. ನಿರ್ದೇಶಕರು/ಮುಖ್ಯಸ್ಥರು/ಪ್ರಾಂಶುಂಪಾಲರಗಳು ಶುಲ್ಕ ವಿನಾಯಿತಿ ಪಡೆದ ವಿದ್ಯಾರ್ಥಿಗಳ ಪಟ್ಟಿಯನ್ನು ಸಿದ್ಧಪಡಿಸಿ ಅಗತ್ಯ ದಾಖಲೆಗಳೊಂದಿಗೆ ಮರುಪಾವತಿಗಾಗಿ ಆಯಾ ಸರ್ಕಾರಿ ಕಚೇರಿಗಳಿಗೆ ಸಲ್ಲಿಸುವುದು ಮತ್ತು ಸದರಿ ಪ್ರತಿಯನ್ನು ದಾಖಲೆಗಳೊಂದಿಗೆ (ಆದಾಯ ಮತ್ತು ಜಾತಿ ಪ್ರಮಾಣ ಪತ್ರಗಳು) ಪರೀಕ್ಷಾಂಗ ವಿಭಾಗಕ್ಕೆ ಮತ್ತು ಹಣಕಾಸು ವಿಭಾಗಕ್ಕೆ ಸಲ್ಲಿಸುವುದು.
2. ಸರ್ಕಾರದಿಂದ ಮಂಜೂರಾದ ಮರುಪಾವತಿ ಮೊತ್ತವು ನಿರ್ದೇಶಕರು/ ಮುಖ್ಯಸ್ಥರು/ಪ್ರಾಂಶುಪಾಲರುಗಳ ಖಾತೆಗೆ ಜಮಾವಾಗಿರುತ್ತದೆ. ಸದರಿ ಮರುಪಾವತಿ ಮೊತ್ತವನ್ನು ತಡ ಮಾಡದೆ ವಿಶ್ವವಿದ್ಯಾನಿಲಯದ ಖಾತೆಗೆ ಜಮಾ ಮಾಡುವುದು ಹಾಗೂ ಮಾಹಿತಿಯನ್ನು ಅಗತ್ಯ ದಾಖಲೆಗಳೊಂದಿಗೆ ಪರೀಕ್ಷಾಂಗ ವಿಭಾಗಕ್ಕೆ ಮತ್ತು ಹಣಕಾಸು ವಿಭಾಗಕ್ಕೆ ಸಲ್ಲಿಸುವುದು.

(.....3)

3. ಪರೀಕ್ಷೆಗಳಿಗೆ ಹಾಜರಾಗುವ ವಿದ್ಯಾರ್ಥಿಗಳ ಶುಲ್ಕದ ವಿವರವನ್ನು ವಿಷಯದೊಂದಿಗೆ ಆನ್‌ಲೈನ್‌ನಲ್ಲಿ ನಮೂದಿಸುವುದು. ಆನ್‌ಲೈನ್ ಪರೀಕ್ಷಾ ಅರ್ಜಿಗಳ ಆಧಾರದಲ್ಲಿ ಪ್ರಶ್ನೆ ಪತ್ರಿಕೆಗಳನ್ನು ವಿತರಿಸಲಿದ್ದು, ಪ್ರತ್ಯೇಕವಾಗಿ ಪ್ರಶ್ನೆ ಪತ್ರಿಕೆ ಕೋರಿಕೆ ಪಟ್ಟಿ ಸಲ್ಲಿಸುವ ಅವಶ್ಯಕತೆ ಇರುವುದಿಲ್ಲ. ಸಂಬಂಧಿಸಿದ ವಿಷಯಗಳಿಗೆ/ ಪತ್ರಿಕೆಗಳಿಗೆ ಕೋಡ್‌ಗಳನ್ನು ಪರಿಶೀಲಿಸಿ ಆನ್‌ಲೈನ್ ಪರೀಕ್ಷಾ ಅರ್ಜಿಯನ್ನು ಸಲ್ಲಿಸತಕ್ಕದ್ದು. ಆನ್‌ಲೈನ್ ಪರೀಕ್ಷಾ ಅರ್ಜಿಯಲ್ಲಿ ವಿಷಯ/ಪತ್ರಿಕೆಗಳ ಕೋಡ್‌ನ್ನು ತಪ್ಪಾಗಿ ನಮೂದಿಸಿದಲ್ಲಿ, ಈ ಕಾರಣದಿಂದಾಗಿ ಪ್ರಶ್ನೆ ಪತ್ರಿಕೆಯಲ್ಲಿನ ಸರಬರಾಜು ಮಾಡುವುದರಲ್ಲಿ ವ್ಯತ್ಯಯವಾದಲ್ಲಿ ಸಂಬಂಧಪಟ್ಟ ನಿರ್ದೇಶಕರು/ಪ್ರಾಂಶುಪಾಲರು/ಮುಖ್ಯಸ್ಥರನ್ನೇ ನೇರವಾಗಿ ಜವಾಬ್ದಾರರನ್ನಾಗಿ ಮಾಡಲಾಗುವುದು.

4. ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯ ಕಾಯ್ದೆ 2000 ರ ಅಧಿನಿಯಮ 60, 61 & 68 ರಂತೆ ವಿಶ್ವವಿದ್ಯಾನಿಲಯದಿಂದ ದಾಖಲಾತಿ ಅನುಮೋದನೆಗೊಳ್ಳದ ವಿದ್ಯಾರ್ಥಿಗಳಿಂದ ಪರೀಕ್ಷಾ ಶುಲ್ಕವನ್ನು ಪಾವತಿಸಿಕೊಳ್ಳಬಾರದು ಮತ್ತು ಪರೀಕ್ಷಾ ಶುಲ್ಕ ಪಾವತಿಸಲು ಅನುಮತಿ ನೀಡಬಾರದು.

5. ನಿರ್ದೇಶಕರು/ಮುಖ್ಯಸ್ಥರು/ಪ್ರಾಂಶುಂಪಾಲರುಗಳಿಗೆ ಈ ಮೂಲಕ ತಿಳಿಸುವುದೇನೆಂದರೆ, ಆನ್‌ಲೈನ್‌ನಲ್ಲಿ ಕೋರುವ ಎಲ್ಲಾ ಮಾಹಿತಿಯನ್ನು ಸರಿಯಾಗಿ ನಮೂದಿಸಬೇಕು.

6. ವಿದ್ಯಾರ್ಥಿಯು ಪರೀಕ್ಷಾ ಶುಲ್ಕ ಪಾವತಿಸಿದಾಕ್ಷಣ ಪರೀಕ್ಷೆ ಬರೆಯಲು ಅರ್ಹನೆಂದು ತಿಳಿಯಬಾರದು. ವಿಶ್ವವಿದ್ಯಾನಿಲಯದ ನಿಯಮಾನುಸಾರ ಅರ್ಹತೆಯಿದ್ದಲ್ಲಿ ಮಾತ್ರ ಪರೀಕ್ಷೆ ಬರೆಯಲು ಅವಕಾಶವಿರುತ್ತದೆ.

7. ವಿದ್ಯಾರ್ಥಿಗಳು ಯಾವುದೇ ಕಾರಣಕ್ಕೂ ಪರೀಕ್ಷಾ ಕೇಂದ್ರವನ್ನು ಬದಲಾಯಿಸುವಂತಿಲ್ಲ.

8. ಸರ್ಕಾರ/ ವಿಶ್ವವಿದ್ಯಾನಿಲಯದಿಂದ ಅನುಮೋದಿಸಲ್ಪಟ್ಟ ಪ್ರವೇಶಪರಿಮಿತಿವನ್ನು ನಮೂದಿಸಬೇಕು ಮತ್ತು ಪ್ರಸ್ತುತ ಶೈಕ್ಷಣಿಕ ಸಾಲಿನಲ್ಲಿ ಯಾವುದೇ ಪ್ರವೇಶವಿಲ್ಲದಿದ್ದರೆ ಹಾಗೆಯೇ ನಮೂದಿಸಬೇಕು.

9. ವಿಶ್ವವಿದ್ಯಾನಿಲಯದಿಂದ ಪ್ರವೇಶ ಅನುಮೋದನೆ ಪಡೆದ ಅರ್ಹ ವಿದ್ಯಾರ್ಥಿಗಳಿಂದ ಪರೀಕ್ಷಾ ಶುಲ್ಕವನ್ನು ವಿಶ್ವವಿದ್ಯಾನಿಲಯದ ಪರವಾಗಿ ಸಂಬಂಧಪಟ್ಟ ಕಾಲೇಜಿನ ಪ್ರಾಂಶುಪಾಲರು ಸಂಗ್ರಹಿಸಿ, ನಂತರ ಒಟ್ಟು ಶುಲ್ಕವನ್ನು ಕ್ರೋಢೀಕರಿಸಿ ವಿಶ್ವವಿದ್ಯಾನಿಲಯದ ನಿಧಿಗೆ RTGS / NEFT ಮೂಲಕ ಎಸ್.ಬಿ.ಐ. ಖಾತೆ ನಂ.36954908103 ಗೆ ದಿನಾಂಕ: 02.12.2019 ರೊಳಗೆ ಪಾವತಿಸುವುದು.

   ವಿಭಾಗದ ಮುಖ್ಯಸ್ಥರು/ ಸಂಯೋಜಕರು ವಿದ್ಯಾರ್ಥಿಗಳಿಂದ ಎಸ್.ಬಿ.ಐ ಆನ್‌ಲೈನ್‌ನಲ್ಲಿ ಪರೀಕ್ಷಾ ಶುಲ್ಕವನ್ನು ಪಾವತಿಸುವುದು ಮತ್ತು ವಿದ್ಯಾರ್ಥಿಗಳಿಂದ ಶುಲ್ಕ ಪಾವತಿಸಿದ ರಶೀದಿಯನ್ನು ಪಡೆಯುವುದು.

   ಪರೀಕ್ಷಾ ಶುಲ್ಕ ಪಾವತಿಸಿರುವ ವಿದ್ಯಾರ್ಥಿಗಳ ಪಟ್ಟಿಯನ್ನು ಸಂಬಂಧಿಸಿದ ದಾಖಲೆಗಳೊಂದಿಗೆ (ಹಣ ಪಾವತಿಸಿದ ರಶೀದಿ, ಜಾತಿ ಮತ್ತು ಆದಾಯ ಪ್ರಮಾಣ ಪತ್ರದ ನಕಲು ಪ್ರತಿ) ನಿರ್ದೇಶಕರು/ ಪ್ರಾಂಶುಪಾಲರು/ವಿಭಾಗದ ಮುಖ್ಯಸ್ಥರು ದೃಢೀಕರಿಸಿ ದಿನಾಂಕ: 02.12.2019 ರೊಳಗೆ ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸುವುದು. ಪರೀಕ್ಷಾ ಶುಲ್ಕದ ಹಣಕಾಸು ಪಟ್ಟಿಯನ್ನು ದ್ವಿಪ್ರತಿಗಳಲ್ಲಿ. (ಪರೀಕ್ಷಾಂಗ ವಿಭಾಗಕ್ಕೆ ಒಂದು ಪ್ರತಿ ಮತ್ತು ಹಣಕಾಸು ವಿಭಾಗಕ್ಕೆ ಒಂದು ಪ್ರತಿಯನ್ನು ತಪ್ಪದೇ ಸಲ್ಲಿಸುವುದು).

10. ಒಮ್ಮೆ ವಿಶ್ವವಿದ್ಯಾನಿಲಯಕ್ಕೆ ಪಾವತಿಸಿದ ಪರೀಕ್ಷಾ ಶುಲ್ಕವನ್ನು ಯಾವುದೇ ಕಾರಣಕ್ಕೂ ಮರುಪಾವತಿಸುವುದಿಲ್ಲ ಹಾಗೂ ಇತರೆ ಶುಲ್ಕಕ್ಕೆ ಮರುಹೊಂದಿಸಲಾಗುವುದಿಲ್ಲ.

11. ಪ್ರತಿ ವಿದ್ಯಾರ್ಥಿಯು ಪ್ರತಿ ಸೆಮಿಸ್ಟರ್‌ನಲ್ಲಿ ಶೇಕಡಾ 75 ರಷ್ಟು ಹಾಜರಾತಿಯನ್ನು ಹೊಂದಿರಬೇಕು. ಕಡಿಮೆ ಹಾಜರಾತಿ ಹೊಂದಿರುವ ವಿದ್ಯಾರ್ಥಿಗಳಿಂದ ಪರೀಕ್ಷಾ ಶುಲ್ಕ ಪಾವತಿಕೊಳ್ಳುವಂತಿಲ್ಲ.

12. ಪುನಾರಾವರ್ತಿತ ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದು ದರ್ಜೆ ಉನ್ನತ್ತಿಕರಣ (ಅಂಕಾಭಿವೃದ್ಧಿ) ಪಡೆಯಲು ಅನುಮತಿ ಪಡೆದ ವಿದ್ಯಾರ್ಥಿಗಳು ಸೇರಿ) ವಿಶ್ವವಿದ್ಯಾನಿಲಯದಿಂದ ಘೋಷಣೆಯಾಗುವ ರ್‍ಯಾಂಕ್‌ಗೆ ಅರ್ಹರಿರುವುದಿಲ್ಲ.

13. ವಿಶ್ವವಿದ್ಯಾನಿಲಯ ಧನಸಹಾಯ ಆಯೋಗ(ಯು.ಜಿ.ಸಿ.)ದ ನಿರ್ದೇಶನದ ಅನುಸಾರ D.O.No.F.12-1/2015(CPP-II) 15th October 2015,ವಿದ್ಯಾರ್ಥಿಯು ಸ್ನಾತಕೋತ್ತರ ಪದವಿಗೆ ಪ್ರವೇಶ ಪಡೆದ ವರ್ಷದಿಂದ 04 (N+02) ಶೈಕ್ಷಣಿಕ ವರ್ಷದೊಳಗೆ ಸ್ನಾತಕೋತ್ತರ ಪದವಿಯನ್ನು ಪೂರ್ಣಗೊಳಿಸಬೇಕಾಗಿರುತ್ತದೆ.

(.....4)

ಆಂತರಿಕ ಅಂಕಗಳನ್ನು ಆನ್‌ಲೈನ್‌ನಲ್ಲಿ ನಮೂದಿಸಿ, ಸದರಿ ಪ್ರತಿಗಳನ್ನು ದಿನಾಂಕ: 05.12.2019 ರೊಳಗೆ ಪರೀಕ್ಷಾಂಗ ವಿಭಾಗಕ್ಕೆ ಸಲ್ಲಿಸುವುದು. ಹಾಗೂ ಆಂತರಿಕ ಅಂಕಗಳನ್ನು ಸಲ್ಲಿಸುವಾಗ ವಿಳಂಬವಾದಲ್ಲಿ / ಸರಿಯಾಗಿ ನೀಡದಿದ್ದಲ್ಲಿ ದಿನವೊಂದಕ್ಕೆ ರೂ. 1,000/-ಗಳಂತೆ ಗರಿಷ್ಠ ರೂ. 10,000-00 (ಹತ್ತು ದಿನಕ್ಕೆ) ಗಳನ್ನು ದಂಡವಾಗಿ ವಿಧಿಸಲಾಗುತ್ತದೆ. ಫಲಿತಾಂಶ ಪ್ರಕಟಗೊಂಡ ನಂತರ ಯಾವುದೇ ಕಾರಣಕ್ಕೂ ಆಂತರಿಕ ಅಂಕಗಳನ್ನು ಸ್ವೀಕರಿಸುವುದಿಲ್ಲ ಮತ್ತು ಬದಲಿಸುವುದಿಲ್ಲ.

ಆನ್‌ಲೈನ್‌ನಲ್ಲಿ ನಮೂದಿಸುವಾಗ ಏನಾದರೂ ಸಮಸ್ಯೆ ಉಂಟಾದಲ್ಲಿ ಹೆಚ್ಚಿನ ಮಾಹಿತಿಗಾಗಿ ಗಣಕಯಂತ್ರ ವಿಭಾಗದವರನ್ನು ಕಛೇರಿ ವೇಳೆಯಲ್ಲಿ ಸಂಪರ್ಕಿಸುವುದು. (ಮೊಬೈಲ್ ಸಂಖ್ಯೆ: ಶ್ರೀ ಸುಮಂತ ವೈ : 9611899105)

<u>ಸೂಚನೆ: ಸಂಬಂಧಪಟ್ಟ ಇಲಾಖೆಗಳಿಂದ 2019-20 ನೇ ಶೈಕ್ಷಣಿಕ ಸಾಲಿನ ಪರೀಕ್ಷಾ ಶುಲ್ಕ ವಿನಾಯಿತಿ ಪಡೆದ ವಿದ್ಯಾರ್ಥಿಗಳ ಶುಲ್ಕದ ಮರುಭರಿಕೆ ಹಣ ಬಂದ ತಕ್ಷಣ ವಿಶ್ವವಿದ್ಯಾನಿಲಯದ ಖಾತೆಗೆ ಪಾವತಿಸಿ ಮಾಹಿತಿಯನ್ನು ಪರೀಕ್ಷಾಂಗ ವಿಭಾಗಕ್ಕೆ ಮತ್ತು ಹಣಕಾಸು ವಿಭಾಗಕ್ಕೆ ಒಂದೊಂದು ಪ್ರತಿಯನ್ನು ಸಲ್ಲಿಸಬೇಕೆಂದು ಈ ಮೂಲಕ ಸೂಚಿಸಲಾಗಿದೆ.</u>

ಎಲ್ಲಾ, ನಿರ್ದೇಶಕರು/ಪ್ರಾಂಶುಪಾಲರು/ಮುಖ್ಯಸ್ಥರು ಸಹಕರಿಸಬೇಕಾಗಿ ಕೋರಲಾಗಿದೆ.

ಆದೇಶದ ಮೇರೆಗೆ,

[signature] 02/11/19

ಕುಲಸಚಿವ (ಪರೀಕ್ಷಾಂಗ)

ಗೆ,

ನಿರ್ದೇಶಕರು / ಮುಖ್ಯಸ್ಥರು/ ಸಂಯೋಜಕರು/ ಪ್ರಾಂಶುಪಾಲರು/ ವಿವಿಧ ಸ್ನಾತಕೋತ್ತರ ವಿಭಾಗಗಳು ಮತ್ತು ವಿವಿಧ ಸ್ನಾತಕೋತ್ತರ ಸಂಯೋಜಿತ ಪದವಿ ಕಾಲೇಜುಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.

ಪ್ರತಿಗಳು:

1. ಸರ್ಕಾರದ ಅಧೀನ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ), ಎಂ.ಎಸ್. ಬಿಲ್ಡಿಂಗ್-2, ಡಾ. ಬಿ.ಆರ್. ಅಂಬೇಡ್ಕರ್ ವೀದಿ, ಬೆಂಗಳೂರು-560 001.
2. ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಅರಮನೆ ರಸ್ತೆ, ಬೆಂಗಳೂರು.
3. ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿಗಳು, ತುಮಕೂರು ಜಿಲ್ಲೆ, ತುಮಕೂರು.
4. ಜಿಲ್ಲಾ ಹಿಂದುಳಿದ ವರ್ಗ ಮತ್ತು ಅಲ್ಪಸಂಖ್ಯಾತರ ಅಧಿಕಾರಿಗಳು, ತುಮಕೂರು ಜಿಲ್ಲೆ, ತುಮಕೂರು.
5. ಹಣಕಾಸು ಅಧಿಕಾರಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
6. ಉಪಕುಲಸಚಿವರು (ಶೈಕ್ಷಣಿಕ ವಿಭಾಗ), ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
7. ಮಾನ್ಯ ಕುಲಪತಿಗಳ ಆಪ್ತ ಕಾರ್ಯದರ್ಶಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
8. ಮಾನ್ಯ ಕುಲಸಚಿವರ ಕಾರ್ಯಾಲಯ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
9. ಸಿಸ್ಟಂ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು
10. ಫಲಿತಾಂಶ ಗಣಕೀಕರಣ ವಿಭಾಗ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
11. ಕಛೇರಿ ಪ್ರತಿ.